## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Vish Wind Infrastrukture LLP ಕಂಪನಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1. ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರ ಏಕ ಕಡತ ಸಂಖ್ಯೆ: 1765–ವಿ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ದಿ:13.11.2018 ರ ಹಂಚಿಕೆ ಸಮಿತಿ ಸಭೆ ನಡವಳಿಗಳು.

* * *

ಪ್ರಸ್ತಾವನೆ :-

ಮೇಲೆ ಓದಲಾದ ಕ್ರಮ ಸಂಖ್ಯೆ: **(1)**ರ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಸರ್ಕಾರಕ್ಕೆ ಪ್ರಸ್ತಾವನೆಯಲ್ಲಿ, M/s Vish Wind Infrastrukture LLP ಕಂಪನಿಯವರು ಗದಗ ಜಿಲ್ಲೆಯ ರೋಣ ತಾಲ್ಲೂಕಿನ ಜಿಗ್ಲೂರು, ಹೊಸಹಳ್ಳಿ ಮತ್ತು ಮೂಗ್ಲಿ ಗ್ರಾಮಗಳಲ್ಲಿ 4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಹಂಚಿಕೆ ನೀಡುವಂತೆ ಕೋರಿರುವ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಸದರಿ ಸ್ಥಳವು ಈಗಾಗಲೇ M/s Mytrah Energy India Limited ರವರಿಗೆ ಹಂಚಿಕೆಯಾಗಿ ರದ್ದುಗೊಂಡಿರುವ ಸ್ಥಳದಲ್ಲಿರುತ್ತದೆ. M/s Vish Wind Infrastrukture LLP ಕಂಪನಿಯ ನೆಟ್‌ವರ್ತ್ ದಿನಾಂಕ:31.03.2017ರ ಅಂತ್ಯಕ್ಕೆ ರೂ.432.11 ಕೋಟಿಗಳೆಂದು ಚಾರ್ಟೆಡ್ ಅಕೌಂಟೆಂಟ್ ದೃಢೀಕರಣ ಪತ್ರ ಹಾಗೂ ಬ್ಯಾಲೆನ್ಸ್ ಶೀಟ್‌ಗಳನ್ನು ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ ಹಾಗೂ ಸದರಿ ಕಂಪನಿಯು ದಿನಾಂಕ:23.02.2016 ರಂದು ನೋಂದಾವಣೆಗೊಂಡಿದ್ದು, ನೋಂದಾಯಿತ ಕಚೇರಿಯು ಮಹಾರಾಷ್ಟ್ರದ ಮುಂಬೈ ಇಲ್ಲಿ ಸ್ಥಾಪಿತಗೊಂಡಿರುವುದಾಗಿ ತಿಳಿಸಿರುತ್ತಾರೆ. ಈ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತ ಬಳಕೆ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಷರತ್ತಿನೊಂದಿಗೆ, M/s Vish Wind Infrastrukture LLP ಕಂಪನಿಗೆ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ 4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಪ್ರಸ್ತಾವನೆಯನ್ನು ಹಂಚಿಕೆ ಸಮಿತಿ ಮುಂದೆ ಮಂಡಿಸಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

Geographical area description for 4 MW capacity wind power project

| Sl. No | Topo sheet No. | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 48 M / 14 | 4 MW<br>(5 Nos x 800 kw) | Jiglur, Hosahalli and Mugli villages of Ron taluk, Gadag district. | In the villages of Column No.4, it is proposed to implement the wind power project by the developer.<br>Ridge Peaks: 592, 582, 587 and 559m AMSL. |
| | Total | 4 MW | | |

5907
20.01.2020

...2)

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ದಿನಾಂಕ:13.11.2018 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ M/s Vish Wind Infrastrukture LLP ಕಂಪನಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ಜಿಗ್ಳೂರು, ಹೊಸಹಳ್ಳಿ ಮತ್ತು ಮೂಗ್ಲಿ ಗ್ರಾಮಗಳಲ್ಲಿ 4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಸದರಿ ಯೋಜನೆಯ ಸ್ಥಳವು ಖಾಸಗಿ ಜಮೀನಾಗಿದ್ದು, ಸದರಿ ಕಂಪನಿಗೆ ಹಂಚಿಕೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಎನ್ 578 ಎನ್‌ಸಿಇ 2018, ಬೆಂಗಳೂರು, ದಿನಾಂಕ:06.01.2020**

ಪ್ರಸ್ತಾವನೆಯಲ್ಲಿ ವಿವರಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s Vish Wind Infrastrukture LLP ಕಂಪನಿಗೆ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ಜಿಗ್ಳೂರು, ಹೊಸಹಳ್ಳಿ ಮತ್ತು ಮೂಗ್ಲಿ ಗ್ರಾಮಗಳಲ್ಲಿ 4 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು ಸ್ವಂತ ಉಪಯೋಗಕ್ಕಾಗಿ / ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಷರತ್ತಿಗೊಳಪಟ್ಟು ಹಾಗೂ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡಿ ಆದೇಶಿಸಲಾಗಿದೆ.

Geographical area description for 4 MW capacity wind power project

| Sl. No | Topo sheet No. | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 48 M / 14 | 4 MW (5 Nos x 800 kw) | Jiglur, Hosahalli and Mugli villages of Ron taluk, Gadag district. | In the villages of Column No.4, it is proposed to implement the wind power project by the developer.<br>Ridge Peaks: 592, 582, 587 and 559m AMSL. |
| | Total | 4 MW | | |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

...3)